ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು,**

**ನೃಪತುಂಗ ರಸ್ತೆ, ಬೆಂಗಳೂರು.**

ಸಂಖ್ಯೆ : ಸಿ5(2)ಪ.ಸ.ಮುಂಬಡ್ತಿ-79/2020-21 ದಿನಾಂಕ :06-08-2021

**ಜ್ಞಾಪನಾ**

ವಿಷಯ:ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಪದೋನ್ನತಿ ನೀಡುತ್ತಿರುವುದರಿಂದ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಎದುರಾಗಿ ಕಾರ್ಯ ನಿರ್ವಹಿಸುತ್ತಿರುವ ಪತ್ರಾಂಕಿತ ವ್ಯವಸ್ಥಾಪಕರುಗಳನ್ನು ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ.

ಉಲ್ಲೇಖ:1] ಸರ್ಕಾರದ ಆದೇಶ ಸಂಖ್ಯೆ: ಇಪಿ 90 ಡಿಎಆರ್.2020 ದಿ24-02-2021

2] ಈ ಕಛೇರಿಯ ಜ್ಞಾಪನಾ ಸಂಖ್ಯೆ: ಸಿ[2] ಹುಮಂ/07/2005-06 ದಿನಾಂಕ: 15-03-2021.

3] ದಿನಾಂಕ: 26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡಾವಳಿಗಳು.

4] ದಿನಾಂಕ: 06-08-2021 ರಂದು ನಡೆದ ಕೌನ್ಸಿಲಿಂಗ್.

-000-

ಬೆಂಗಳೂರು ಮತ್ತು ಮೈಸೂರು ವಿಭಾಗದ ವ್ಯಾಪ್ತಿಯ 06 ಉಪ ನಿರ್ದೇಶಕರ ಕಛೇರಿಗಳಲ್ಲಿ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಗಳನ್ನು ಉಲ್ಲೇಖ[1]ರ ಸರ್ಕಾರದ ಆದೇಶದಲ್ಲಿ ಪತ್ರಾಂಕಿತ ಸಹಾಯಕರ ಹುದ್ದೆಗಳನ್ನಾಗಿ ಉನ್ನತೀಕರಿಸಲಾಗಿದೆ. ಉಲ್ಲೇಖ [2] ರಲ್ಲಿ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿನ ಉನ್ನತೀಕರಿಸಿದ ಹುದ್ದೆಗಳಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಪತ್ರಾಂಕಿತ ವ್ಯವಸ್ಥಾಪಕರುಗಳು ಬಡ್ತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆವಿಗೆ, ಪತ್ರಾಂಕಿತ ಸಹಾಯಕರ ಹುದ್ದೆಗೆ ಎದುರಾಗಿ ಸ್ವಂತ ವೇತನ ಶ್ರೇಣಿಯಲ್ಲಿ ಮುಂದುವರೆಸಲಾಗಿತ್ತು. ದಿನಾಂಕ: 06-08-2021 ರಂದು ಉನ್ನತೀಕರಿಸಿದ ಈ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರ ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಮುಂಬಡ್ತಿ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ಸದರಿ ಹುದ್ದೆಗಳ ಎದುರಾಗಿ ಕಾರ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಅಧಿಕಾರಿಗಳನ್ನು ಪತ್ರಾಂಕಿತ ವ್ಯವಸ್ಥಾಪಕರುಗಳ ಖಾಲಿ ಹುದ್ದೆಗಳಿಗೆ ಸ್ಥಳಾಂತರಿಸುವ ಸಲುವಾಗಿ ದಿನಾಂಕ: 06-08-2021 ರಂದು ಕೌನ್ಸಿಲಿಂಗ್ ನಡೆಸಿದ್ದು, ಅದರಂತೆ, ಅಧಿಕಾರಿಗಳು ಸ್ವತ: ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನಲ್ಲಿ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಂಡಂತೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ. ಸ್ಥಳ ನಿಯುಕ್ತಿಗೊಂಡ ಅಧಿಕಾರಿಗಳನ್ನು ಸಕಾಲದಲ್ಲಿ ಕಛೇರಿ ಕರ್ತವ್ಯದಿಂದ ಬಿಡುಗಡೆಗೊಳಿಸಿ, ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯದ ಮೇಲೆ ಹಾಜರಾಗುವಂತೆ ಸೂಚಿಸಿ ಬಿಡುಗಡೆಗೊಳಿಸಲು ಸಂಬಂದಿಸಿದ ಅಧಿಕಾರಿಗಳಿಗೆ ಸೂಚಿಸಿದೆ.

| ಕ್ರ.ಸಂ | ಸ್ಥಳಾಂತರಿಸಿರುವ ಅಧಿಕಾರಿಗಳ ಹೆಸರು ಮತ್ತು ವಿಳಾಸ | ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿ ಹೆಸರು ಮತ್ತು ವಿಳಾಸ |
|---|---|---|
| 01 | ಶ್ರೀ.ಕೆ.ಎಂ.ಸತ್ಯರಾಯಣ ಗೌಡ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಚಿಕ್ಕಬಳ್ಳಾಪುರ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ |
| 02 | ಶ್ರೀ.ಎಂ.ಎಸ್.ರಾಮಪ್ರಸನ್ನ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ರಾಮನಗರ ಜಿಲ್ಲೆ. | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ |
| 03 | ಶ್ರೀ.ಎಸ್.ಜಯಪ್ರಕಾಶ್ ಹೆಗ್ಡೆ, ಪತ್ರಾಂಕಿತ ವ್ಯವಸ್ಥಾಪಕರು, ಉಪ ನಿರ್ದೇಶಕರ ಕಛೇರಿ, ಉಡುಪಿ ಜಿಲ್ಲೆ. | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಬಂಟ್ವಾಳ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ |

ಷರತ್ತುಗಳು:-

*01.* ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ವತ: ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ, ಸ್ಥಳ ಬದಲಾವಣೆಗೆ ಅವಕಾಶವಿರುವುದಿಲ್ಲ.

*02.* ಕಛೇರಿ ಮುಖ್ಯಸ್ಥರುಗಳು ಸಂಬಂಧಿಸಿದ ಅಧಿಕಾರಿಗಳನ್ನು ಸಕಾಲದಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.

*03.* ಸ್ಥಳನಿಯುಕ್ತಿಗಾಗಿ ಸ್ವತ: ಅಧಿಕಾರಿಗಳೇ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ ಯಾವುದೇ ಪ್ರಯಾಣ ಭತ್ಯೆ, ವರ್ಗಾವಣೆ ಭತ್ಯೆ ಅಥವಾ ಸೇರಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

*04.* ಅಧಿಕಾರಿಗಳು ಬಿಡುಗಡೆ ಮತ್ತು ಸೇರ್ಪಡೆ ಬಗ್ಗೆ ತಪ್ಪದೇ ಈ ಕಛೇರಿಗೆ ವರದಿ ಸಲ್ಲಿಸುವುದು.

ವಿ.ಅನ್ಬುಕುಮಾರ್, ಭಾ.ಆ.ಸೇ
ಆಯುಕ್ತರು.

ಗೆ,

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
4) ಸಂಬಂಧಿಸಿದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ,
5) ಸಂಬಂದಿಸಿದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ,
6) ಸಂಬಂದಿಸಿದ ಅಧಿಕಾರಿಗಳಿಗೆ
7) ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
8) ಕಛೇರಿ ಪ್ರತಿ.